**2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ**
**ಚಿಕ್ಕಮಗಳೂರು**

**ಸ್ಪೆಷಲ್ ಮೊಕದ್ದಮೆ ನಂಃ 62/2018**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಚನ್ನೇಶ | ಪಿಡಬ್ಲೂ -11 |
| ತಂದೆಯ ಹೆಸರು | - | ಚೆನ್ನಯ್ಯ | ಸಿಡಬ್ಲೂ -28 |
| ವಯಸ್ಸು | - | 45 ವರ್ಷ | |
| ಉದ್ಯೋಗ | - | ಪೊಲೀಸ್ ನಿರೀಕ್ಷಕರು, ಕೊತ್ತನೂರು ಪೊಲೀಸ್ ಠಾಣೆ, ಬೆಂಗಳೂರು | |
| ವಾಸ ಸ್ಥಳ | - | ಬೆಂಗಳೂರು | |

ದಿನಾಂಕಃ 24.08.2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ

1. ನಾನು ದಿನಾಂಕ 07.06.2006 ರಿಂದ ದಿನಾಂಕ 25.07.2007 ರವರೆಗೆ ಲಿಂಗದಹಳ್ಳಿ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕನಾಗಿ ಕಾರ್ಯ ನಿರ್ವಹಿಸಿದ್ದೇನೆ.

2. ದಿನಾಂಕಃ 05.10.2006 ರಂದು ಮಧ್ಯಾಹ್ನ 2.45 ಗಂಟೆಗೆ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಮೊಕದ್ದಮೆ ಸಂಖ್ಯೆ: 107/2006 ರಲ್ಲಿ ಐಪಿಸಿ ಕಲಂ **379** ರೀತಿ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ದೂರಿನ ದೃಢೀಕೃತ ಪ್ರತಿಯನ್ನು ನೋಡುತ್ತಿದ್ದು ಅದನ್ನು ಈಗಾಗಲೇ

ನಿಪಿ.1 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1 (ಎ) ಎಂದು ಗುರುತಿಸಲಾಯಿತು. ನಾನು ದಾಖಲು ಮಾಡಿದ್ದ ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು ನೋಡುತ್ತಿದ್ದು ಅದನ್ನು ನಿಪಿ.22 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.22(ಎ) ಎಂದು ಗುರುತಿಸಲಾಯಿತು.

3. ಪ್ರಕರಣವು ಘೋರ ಅಪರಾಧಗಳನ್ನು ಒಳಗೊಂಡಿದ್ದರಿಂದ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.29 ರವರಿಗೆ ನೀಡಿರುತ್ತೇನೆ.

<u>ಪಾಟೀ ಸವಾಲುಃ ಶ್ರೀ ಎಸ್ ಕೆ ಎಂ ವಕೀಲರಿಂದ – ಆರೋಪಿ ಪರವಾಗಿ</u>

4. ನೀವು ಹೇಳಿದಂತೆ ಪಿರ್ಯಾದಿ ಠಾಣೆಗೆ ಹಾಜರಾಗಿ ಯಾವುದೇ ದೂರನ್ನು ನೀಡದೇ ಇದ್ದರೂ ಸಹ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳುಸಾಕ್ಷ್ಯನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)

2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಚಿಕ್ಕಮಗಳೂರು.

ಸಾಕ್ಷಿಯ ಸಹಿ